ಗಡಿಕನ್ನಡಿಗ

www.gadikannadiga.com

ಸಂಪಾದಕ:ಮುರುಗೇಶ ಬಿ.ಶಿವಪೂಜಿ

ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ,ಕೊಪ್ಪಳ,ಗದಗ, ವಿಜಯಪುರ, ವಿಜಯನಗರ ಬಳ್ಳಾರಿಗಳಿಂದ ಏಕಕಾಲಕ್ಕೆ ಪ್ರಕಟಿತ

ಸಂಪುಟ:22/ಸಂಚಿಕೆ:26 RNI NO.KAR KAN/2003/10452:No./PMG/KA/NK/BM/743/21-23 ಬುಧವಾರ ದಿನಾಂಕ: 13-12-2023 ಪುಟಗಳು: 6 ಬೆಲೆ:1 ರೂ ☎ 9480498694 / Email-mbshivapuji@gmail.com

14 ರಂದು ಕೆಂಪಣ್ಣ ನೇತೃತ್ವದಲ್ಲಿ ಗುತ್ತಿಗೆದಾರರ ಸಂಘದ ಮುಷ್ಕರ

ಬೆಳಗಾವಿ:ಬೆಳಗಾವಿಯ ಸುವರ್ಣ ಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇ ಶನದ ಸಂದರ್ಭದಲ್ಲಿ ಬೆಳ ಗಾವಿ ಜಿಲ್ಲೆಯ ಗುತ್ತಿಗೆ ದಾರರು ಎದುರಿ ಸುತ್ತಿರುವ ಸಮಸ್ಯೆಗಳ ಕುರಿತು ಸರ್ಕಾರದ ಗಮನ ಸೆಳೆಯುವ ದೃಷ್ಟಿಯಿಂದ ಗುರು ವಾರ ದಿನಾಂಕ 14/12/2023 ರಂದು ಸುವರ್ಣ ಗಾರ್ಡನ್ ಟೆಂಟ್ ನಂ 3 ರಲ್ಲಿ ಬೆಳಿಗ್ಗೆ 10 ಗಂಟೆಯಿಂದ ಸಾಯಂಕಾಲ 4 ಗಂಟೆ ವರೆಗೆ ಒಂದು ದಿನದ ಮುಷ್ಕರ ಹಮ್ಮಿಕೊ ಳ್ಳಲಾಗಿದೆ.ಗುತ್ತಿಗೆದಾರರ ಸಂಘದ ರಾಜ್ಯಾಧ್ಯಕ್ಷ ಡಿ ಕೆಂಪಣ್ಣ ನೇತೃತ್ವದಲ್ಲಿ ಮುಷ್ಕರ ನಡೆಯಲಿದೆ.

ಈ ಮುಷ್ಕರದಲ್ಲಿ ರಾಜ್ಯ ಸಂಘದ ಪದಾಧಿಕಾರಿಗಳು ಉಪಸ್ಥಿತರಿರುವರು. ಕಾರಣ ಗುತ್ತಿಗೆದಾರ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಮುಷ್ಕರದಲ್ಲಿ ಭಾಗವಹಿಸಿ ಗುತ್ತಿಗೆದಾರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವ ದೃಷ್ಟಿಯಿಂದ ಮುಷ್ಕರವನ್ನು ಯಶಸ್ವಿಗೊಳಿಸ ಬೇಕೆಂದು ಹಿರಿಯ ಜಿಲ್ಲಾ ಗೌರವಧ್ಯಕ್ಷ ಬಸವರಾಜ ಮಟಗಾರ ಪತ್ರಿಕಾ ಪ್ರಕಟಣೆಯ ಲ್ಲಿ ವಿನಂತಿಸಿದ್ದಾರೆ.

ಹಲವು ವರ್ಷಗಳಿಂದ ಗುತ್ತಿಗೆದಾರರ ಬಿಲ್ ಹಣವನ್ನು ಸರಕಾರ ಪಾವತಿಸಬೇಕಾಗಿದ್ದು ಈ ಸಂಬಂಧ ಗುತ್ತಿಗೆ ದಾರರ ಸಂಘದವರು ಹಲವು ಬಾರಿ ಮುಖಮಂತ್ರಿ ಗಳನ್ನು ಭೇಟಿ ಮಾಡಿ ಮನವಿ ಮಾಡಿಕೊಂಡಿದ್ದರೂ ಸಮಸ್ಯೆ ಪರಿಹಾರವಾಗಿಲ್ಲವೆಂದು ಅವರು ದೂರಿದ್ದಾರೆ.

ರಾಯಬಾಗ ಮತಕ್ಷೇತ್ರ ವ್ಯಾಪ್ತಿಯ 39 ಕೆರೆಗಳ ನೀರು ತುಂಬಿಸುವ ಯೋಜನೆ

ಕಾಮಗಾರಿ ಪೂರ್ಣಗೊಳಿಸಲು ಕ್ರಮ-ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ

ಬೆಳಗಾವಿ: ಸುವರ್ಣ ಸೌಧ, ಡಿ.12: ಬೆಳಗಾವಿ ಜಿಲ್ಲೆ ರಾಯಬಾಗ ಮತಕ್ಷೇತ್ರದ ರಾಯಬಾಗ ಮತ್ತು ಚಿಕ್ಕೋಡಿ ತಾಲೂಕುಗಳ ವ್ಯಾಪ್ತಿಯ 39 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯ ಕಾಮಗಾರಿ ಯನ್ನು ಶೀಘ್ರದಲ್ಲಿ ಪೂರ್ಣಗೊಳಿಸಲು ಕ್ರಮವಹಿ ಸುವುದಾಗಿ ಉಪಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಹೇಳಿದರು.

ಮಂಗಳವಾರ ವಿಧಾನಸಭೆಯಲ್ಲಿ ಪ್ರಶ್ನೋತ್ತರ ವೇಳೆಯಲ್ಲಿ ಭಾಗವಹಿಸಿ ಶಾಸಕ ದುರ್ಯೋಧನ ಐಹೊಳೆ ಅವರ ಪ್ರಶ್ನೆಗೆ ಉತ್ತರಿಸಿದರು.ಈ ಯೋಜನೆಯ ಕಾಮಗಾರಿಯು ಶೇ. 80 ರಷ್ಟು ಪೂರ್ಣಗೊಂಡಿದ್ದು, ಯೋಜನೆಯ ಜಾಕವೇಲ್ ಮತ್ತು ಪಂಪ್ ಹೌಸ್ ನರ್ಮಾಣ ಸ್ಥಳದಲ್ಲಿ ರೈತರು ತಕರಾರು ಮಾಡಿರುವುದರಿಂದ ಕಾಮಗಾರಿ ಸ್ಥಗಿತವಾಗಿದೆ. ತಕರಾರು ಮಾಡಿರುವ ರೈತ ನ್ಯಾಯಾಲಯದಲ್ಲಿ ಈ ಕುರಿತು ಮೊಕದ್ದಮೆ ಹೂಡಿದ್ದು, ಸಮಸ್ಯೆಯನ್ನು ಬಗೆಹರಿಸಿ ಕಾಮಗಾರಿ ಪೂರ್ಣಗೊಳಿಸಲು ಶೀಘ್ರ ಕ್ರಮವಹಿಸಲಾಗುವುದು. ಜಲಸಂಪನ್ಮೂಲ ಇಲಾಖೆಯ ಹಿರಿಯ ಅಧಿಕಾರಿಗಳನ್ನು ಈ ಕುರಿತು ಚರ್ಚಿಸಲು ರೈತರ ಬಳಿ ಕಳಿಸಲಾಗುವುದು. ಶಾಸಕರು, ಅಧಿಕಾರಿಗಳು ಸಂಬಂಧಪಟ್ಟ ರೈತರೊಂದಿಗೆ ಚರ್ಚಿಸಿ ಸೌಹಾರ್ಧವಾಗಿ ಸಮಸ್ಯೆಯನ್ನು ಬಗೆಹರಿಸಬೇಕು. ಇಲಾಖೆಯಿಂದ ಅಗತ್ಯ ಅನುದಾನ, ಸಹಕಾರ ನೀಡಲಾಗುವುದೆಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.ಕರಗಾಂವ ಏತ ನೀರಾವರಿ ಕಾಮಗಾರಿಯನ್ನು ಪುನರ್ ಪ್ರಾರಂಭಿಸಲು ಶಾಸಕರು ವಿನಂತಿಸಿದ್ದು, ಈ ಕುರಿತು ಪರಿಶೀಲಿಸಿ ಸೂಕ್ತ ಕ್ರಮವಹಿಸುವುದಾಗಿ ಅವರು ತಿಳಿಸಿದರು. ಶಿಂಧೋಗಿ ಭಾಗದ 8 ಹಳ್ಳಿಗಳ ಕುಡಿಯುವ ನೀರಿನ, ನೀರಾವರಿ ಸಮಸ್ಯೆಗಳ ಪರಿಹರಿಸಲು ಕ್ರಮ: ಪ್ರಶ್ನೋತ್ತರ ವೇಳೆಯಲ್ಲಿ ಸವದತ್ತಿ ಯಲ್ಲಮ್ಮಾ ವಿಧಾನಸಭಾ ಕ್ಷೇತ್ರದ ಶಾಸಕ ವಿಶ್ವಾಸ ವಸಂತ ವೈದ್ಯ ಅವರು ಮಾತನಾಡಿ, ಸವದತ್ತಿ ಯಲ್ಲಮ್ಮಾ ವಿಧಾನಸಭಾ ವ್ಯಾಪ್ತಿಯಲ್ಲಿ ಬರುವ ಮಲಪ್ರಭಾ ಎಡದಂಡೆ ಕಾಲುವೆ ವ್ಯಾಪ್ತಿಯ ಬಲದಂಡೆ ಕಾಲುವೆಗೆ ನರ್ಮಿಸಿರುವ ರಿವರ್ ಸೈಫನ್ ಒಡೆದಿರುವುದರಿಂದ ಶಿಂಧೋಗಿ ಭಾಗದ ಸುಮಾರು 8 ಹಳ್ಳಿಗಳ 500 ಎಕರೆ ಜಮೀನು ನೀರಾವರಿಯಿಂದ ವಂಚಿತವಾಗಿದೆ ಮತ್ತು ಈ ಭಾಗದ ಜನರಿಗೆ ಕುಡಿಯುವ ನೀರಿನ ತೊಂದರೆಯಾಗಿದೆ ಎಂದು ಹೇಳಿದರು. ಈ ಕುರಿತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಉತ್ತರಿಸಿ, ಈ ಹಳೆಯ ರಿವರ್ ಸೈಫನ್ ಬದಲಾಗಿ (2 ನೇ ಪುಟಕ್ಕೆ)

ಮಹಿಳೆ ವಿವಸ್ತ್ರ ಪ್ರಕರಣ : ಆರೋಪಿಗಳ ವಿರುದ್ಧ ಕಠಿಣ ಕ್ರಮ, ಪ್ರೇಮಿಗಳಿಗೆ ರಕ್ಷಣೆ : ಗೃಹ ಸಚಿವ ಡಾ.ಜಿ.ಪರಮೇಶ್ವರ

ಸುವರ್ಣಸೌಧ ಬೆಳಗಾವಿ ಡಿ.12: ಬೆಳಗಾವಿ ತಾಲ್ಲೂಕಿನ ಹೊಸ ವಂಟಮೂರಿ ಗ್ರಾಮದಲ್ಲಿ ಮಹಿಳೆಯನ್ನು ವಿವಸ್ತ್ರಗೊಳಿಸಿ ಥಳಿಸಿದ ಪ್ರಕರಣದಲ್ಲಿ ಈಗಾಗಲೇ 7 ಜನರನ್ನು ಬಂಧಿಸಲಾಗಿದೆ. ಪ್ರೀತಿಸಿ ಗ್ರಾಮ ಬಿಟ್ಟು ಹೋದ ಪ್ರೇಮಿಗಳನ್ನು ಹುಡುಕಿ ಸರ್ಕಾರದಿಂದ ಸೂಕ್ತ ರಕ್ಷಣೆ ಕಲ್ಪಿಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಮಂಗಳವಾರ ವಿಧಾನ ಸಭೆಯ ಶೂನ್ಯವೇಳೆಯಲ್ಲಿ ಪ್ರಕರಣದ ಕುರಿತು ಜರುಗಿದ ಚರ್ಚೆಯಲ್ಲಿ ಅವರು ಮಾತನಾಡಿದರು.

ನಾಗರಿಕ ಸಮಾಜ ತಲೆತಗ್ಗಿಸುವ ಘಟನೆ ಇದಾಗಿದೆ. ಗ್ರಾಮದ ಅಶೋಕ್ ಗಡ್ಡಕರಿ ಹಾಗೂ ಪ್ರಿಯಾಂಕ ಪರಸ್ಪರ ಪ್ರೀತಿಸುತ್ತಿದ್ದರು. ಈ ಪ್ರೀತಿಗೆ ಹುಡುಗಿಯ ಮನೆಯವರು ವಿರೋಧಿಸಿದ್ದರಿಂದ ಪ್ರೇಮಿಗಳು ಗ್ರಾಮ ಬಿಟ್ಟು ಹೋಗಿದ್ದಾರೆ. ಈ ವಿಚಾರ ತಿಳಿದ ಹುಡುಗಿಯ ಸಂಬಂಧಿಕರು, ಹುಡುಗನ ಮನೆಗೆ ಆಗಮಿಸಿ, ತಾಯಿ ಹಾಗೂ ವಯಸ್ಸಾದ ಅಜ್ಜಿಯ ಮೇಲೆ ದೌರ್ಜನ್ಯ ಎಸಗಿದ್ದಾರೆ. ಅಷ್ಟಕ್ಕೆ ಸುಮ್ಮನಾಗದೆ 55 ವರ್ಷದ ಹುಡುಗನ (2 ನೇ ಪುಟಕ್ಕೆ)

ಮೈಸೂರು ಕಾಗದ ಕಾರ್ಖಾನೆ ಆರಂಭಕ್ಕೆ ಸಕಾರಾತ್ಮಕ ಚಿಂತನೆ : ಸಚಿವ ಎಂ.ಬಿ.ಪಾಟೀಲ್

ಬೆಳಗಾವಿ ಸುವರ್ಣಸೌಧ,ಡಿ.12: ಭದ್ರಾವತಿಯಲ್ಲಿರುವ ಮೈಸೂರು ಕಾಗದ ಕಾರ್ಖಾನೆಯ ಪುನರಾರಂಭಕ್ಕೆ ಸರ್ಕಾರವು ಸಕಾರಾತ್ಮಕವಾಗಿ ಚಿಂತನೆ ನಡೆಸಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲ ಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ.ಪಾಟೀಲ್ ಇಂದು ವಿಧಾನ ಪರಿಷತ್‌ನಲ್ಲಿ ತಿಳಿಸಿದರು.

ಸದಸ್ಯ ಎಸ್.ರುದ್ರೇಗೌಡ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು , ಮೈಸೂರು ಕಾಗದ ಕಾರ್ಖಾನೆಯು ತೀವ್ರ ತರಹದ ಹಣಕಾಸಿನ ಸಮಸ್ಯೆಯನ್ನು ಎದುರಿಸುತ್ತಿದ್ದ ಕಾರಣ ಎಲ್ಲಾ ಉತ್ಪಾದನಾ ಘಟಕಗಳನ್ನು 21-11-2015 ರಿಂದ ಸ್ಥಗಿತಗೊಳಿಸಿದ್ದು, ಜೂನ್ 2023 ಅಂತ್ಯಕ್ಕೆ ಒಟ್ಟು ಸಂಚಿತ ನಷ್ಟ 1482 ಕೋಟಿ ರೂ ಆಗಿದೆ ಎಂದು ತಿಳಿಸಿದರು.

ಸರ್ಕಾರವು ಕಾರ್ಖಾನೆಯ ಪುನರುಜ್ಜೀವನ ಸಾಧ್ಯವಿಲ್ಲವೆಂದು ತೀರ್ಮಾನಿಸಿ ಕಾರ್ಖಾನೆಯ ಕಾರ್ಯಚಟುವಟಿಕೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದಲ್ಲಿ ನೀಡಬೇಕೆಂದು ತೀರ್ಮಾನ ಕೈಗೊಂಡು, ಈ ಪ್ರಕ್ರಿಯೆಗಳಿಗೆ ಮೆಜ ಐಡೆಕ್‌ನ ಸೇವೆಗಳನ್ನು ಬಳಸಿಕೊಳ್ಳಲಾಗುತ್ತಿದೆ.

ಆರ್‌ಎಫ್ ಕ್ಯೂ ಅನ್ನು ಏಪ್ರಿಲ್ 2017,ಆಗಸ್ಟ್ 2018 ಹಾಗೂ ಮಾರ್ಚ್ 2019 ರಲ್ಲಿ ಪ್ರಕಟಿಸಲಾಗಿತ್ತು. ಆರ್‌ಎಫ್ ಕ್ಯೂಗೆ ಯಾವುದೇ ಅರ್ಜಿ ಸ್ವೀಕೃತವಾಗಿರುವುದಿಲ್ಲ. ಆರ್‌ಎಫ್‌ಕ್ಯೂ ಅನ್ನು ಕಂಪನಿಯು ಮೊದಲೇ ಅಪ್‌ಲೋಡ್ ಮಾಡಲಾಗಿದ್ದು ಆರ್‌ಎಫ್‌ಕ್ಯೂಗಾಗಿ ಪ್ರಚಾರವನ್ನು ಮತ್ತು ಈಗಾಗಲೇ ವ್ಯಾಪಕ ನೀಡಲಾಗಿರುವುದರಿಂದ ಪ್ರಸ್ತಾವನೆಗಾಗಿ ವಿನಂತಿಯನ್ನು (ಆರ್‌ಎಫ್‌ಪಿ) (2 ನೇ ಪುಟಕ್ಕೆ)

ಮಾರ್ಚ್ ಅಂತ್ಯಕ್ಕೆ ಚಿಕ್ಕರಂಗನಾಥ, ಕೊಂಗಳ, ಮತ್ತು ಮುಡಿಗುಂಡ ಕೆರೆ ಕಾಮಗಾರಿ ಪೂರ್ಣ: ಸಚಿವ ಎನ್.ಎಸ್.ಭೋಸರಾಜು

ಬೆಳಗಾವಿ ಸುವರ್ಣಸೌಧ,ಡಿ.12: ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರದ ಚಿಕ್ಕರಂಗನಾಥ, ಕೊಂಗಳ ಮತ್ತು ಮುಡಿಗುಂಡ ಕೆರೆಗಳ ಅಭಿವೃದ್ಧಿಯ 5 ಕಾಮಗಾರಿಗಳಿಗೆ ರಾಜ್ಯ ಸರ್ಕಾರ ರೂ.10 ಕೋಟಿ ಮಂಜೂರು ಮಾಡಿದೆ. ಈಗಾಗಲೇ ರೂ.3.38 ಕೋಟಿ ಬಿಡುಗಡೆಯಾಗಿದ್ದು, 2024ರ ಮಾರ್ಚ್ ಅಂತ್ಯಕ್ಕೆ ಕಾಮಾಗರಿಗಳು ಪೂರ್ಣಗೊಳ್ಳಲಿವೆ ಎಂದು ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್.ಎಸ್.ಭೋಸರಾಜು ಹೇಳಿದರು.

ಮಂಗಳವಾರ ವಿಧಾನ ಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕ ಕೃಷ್ಣಮೂರ್ತಿ.ಎ.ಆರ್ ಪ್ರಶ್ನೆಗೆ ಅವರು ಉತ್ತರಿಸಿದರು.

ಈ ಕೆರೆಗಳು ಒತ್ತುವರಿ ತೆರವುಗೊಳಿಸಿಕಾಮಗಾರಿಗಳನ್ನು ಮುಂದುವರಿಸುವಂತೆ ರೈತರು ಮನವಿ ಮಾಡಿದ್ದಾರೆ. ಈ ಕಾರಣದಿಂದ ಕಾಮಗಾರಿ ಪ್ರಗತಿಯು ಕುಂಠಿತಗೊಂಡಿದೆ. ಈ ಕೆರೆಗಳ ಅಚ್ಚುಕಟ್ಟು ಪ್ರದೇಶದ ಮುಂಗಾರು ಬೆಳೆಗಳಿಗೆ ನೀರು ನೀಡಲು ಕಬಿನ ನಾಲೆಯಿಂದ ಕೆರೆಗಳಿಗೆ ನೀರು ಹರಿಸಲಾಗಿದೆ. ಈ 5 ಕಾಮಗಾರಿಗಳ ಗುತ್ತಿಗೆ ಮೊತ್ತ ರೂ.8.30 ಕೋಟಿ ಆಗಿದೆ. ಹೊಂಗನೂರು ಹೀರೆ ಕೆರೆಯು 732 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶವನ್ನು ಹೊಂದಿದೆ. 30.ಕಿ.ಮೀ ಕೆನಾಲ್ ನರ್ಮಿಸಬೇಕಿದೆ. ಈ ಕೆರೆಯ ಅಭಿವೃದ್ಧಿ ರೂ.18 ಕೋಟಿ ಅವಶ್ಯಕತೆ ಇದೆ. ಅನುದಾನ ಲಭ್ಯತೆ ಮೇಲೆ ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವುದಾಗಿ ಸಚಿವ ಎನ್.ಎಸ್.ಭೋಸರಾಜು ತಿಳಿಸಿದರು. ಇದೇ ಸಂದರ್ಭದಲ್ಲಿ ಕಲಬುರಗಿ ತಾಲ್ಲೂಕಿನ ಅಫಜಲಪುರ ಮತಕ್ಷೇತ್ರ ವ್ಯಾಪ್ತಿಯ ಫಿರೊಜೊಬಾದ್ ಏತ ನೀರಾವರಿ ಯೋಜನೆ 2019-20ರಲ್ಲಿ ಸರ್ಕಾರ ರೂ.2.88 ಬಿಡುಗಡೆ ಮಾಡಿದೆ. ಆದರೆ ಏತ ನೀರಾವರಿ ಪುನರುಜ್ಜೀವನಗೊಳಿಸಲು ವಾಸ್ತವಾಗಿ ರೂ.15.14 ಕೋಟಿ ಅವಶ್ಯಕವಿದ್ದು, ಅನುದಾನದ ಲಭ್ಯತೆ ಆಧರಿಸಿ ಕಾಮಗಾರಿ ಮಂಜೂರಾತಿ ನೀಡುವುದಾಗಿ ಶಾಸಕ ಪಾಟೀಲ್.ಎಂ.ವೈ ಪ್ರಶ್ನೆಗೆ ಸಚಿವ ಸಚಿವ ಎನ್.ಎಸ್.ಭೋಸರಾಜು ಉತ್ತರಿಸಿದರು.

ಬಳ್ಳಾರಿ ಜೀನ್ಸ್ ಟೆಕ್ಸ್‌ಟೈಲ್ ಪಾರ್ಕ್‌ಗೆ 50 ಎಕರೆ ಜಮೀನು : ಸಚಿವ ಶಿವಾನಂದ ಎಸ್.ಪಾಟೀಲ್

ಬೆಳಗಾವಿ ಸುವರ್ಣಸೌಧ,ಡಿ.12: ಬಳ್ಳಾರಿ ಜಿಲ್ಲೆಯಲ್ಲಿ ಜೀನ್ ಟೆಕ್ಸ್ ಟೈಲ್ ಪಾರ್ಕ್ ಸ್ಥಾಪಿಸಲು ಗೆ ಕೆಐಎಡಿಬಿ ಅವರಿಂದ ಆಲದಹಳ್ಳಿ ಗ್ರಾಮದ ಸರ್ವೆ ನಂ.122/ಎ ರ 50 ಎಕರೆ ಜಮೀನನ್ನು ಬಳ್ಳಾರಿ ಗಾರ್ಮೆಂಟ್ಸ್ ಎಕ್ಸ್‌ಪೋರ್ಟ್ ಕ್ಲಸ್ಟರ್ ಪ್ರೈ.ಲಿ. ಬಳ್ಳಾರಿ ಅವರಿಗೆ ಹಂಚಿಕೆ ಮಾಡಲಾಗಿದೆ ಎಂದು ಎಂದು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಎಸ್.ಪಾಟೀಲ ಇಂದು ವಿಧಾನ ಪರಿಷತ್‌ನಲ್ಲಿ ತಿಳಿಸಿದರು.

ಸದಸ್ಯ ವೈ.ಎಂ.ಸತೀಶ್ ಅವರ ಚುಕ್ಕೆಗುರುತಿನ ಪ್ರಶ್ನೆಗೆ ಉತ್ತರಿಸಿದ ಅವರು, ಸದರಿ ಎಸ್.ಪಿ.ವಿ. ಮುಖಾಂತರ ಜವಳಿ ಪಾರ್ಕ್ ನ್ನು ಸ್ಥಾಪಿಸಲು ಅವಶ್ಯವಿರುವ ಪ್ರಾರಂಭಿಕ ಕ್ರಮಗಳು ಅಂದರೆ, ವಿವಿಧ ಇಲಾಖೆಗಳಿಂದ ಪ್ರಮಾಣ ಪತ್ರಗಳನ್ನು ಹಾಗೂ ಏಖಂಆಃ ಬೆಂಗಳೂರು ರವರಿಂದ ವಿವರವಾದ ಯೋಜನ ವರದಿಗೆ ಅನುಮೋದನೆಯನ್ನು ಪಡೆದ ನಂತರ ಪಾರ್ಕ್‌ನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳಲಾಗುವುದು.

ಜೀನ್ಸ್ ಪಾರ್ಕ್ ಸ್ಥಾಪನೆಯಿಂದ ಎಲ್ಲಾ ಘಟಕಗಳನ್ನು ಒಂದೇ ಸ್ಥಳದಲ್ಲಿ ಸ್ಥಾಪಿಸಿ ಉತ್ಪನ್ನಗಳ ಗುಣಮಟ್ಟದ ಹೆಚ್ಚಳ ಹಾಗೂ ಉತ್ಪಾದನಾ ವೆಚ್ಚ ಸಾಗಾಣಿಕೆ ವೆಚ್ಚ, ಖಿಣಡಿಟಿಚಿಡಿಠಣಟಿಜ ಣುಟಜ ನ್ನು ಕಡಿಮೆಗೊಳಿಸಿ, ಸ್ಪರ್ಧಾತ್ಮಕ ದರದಲ್ಲಿ ಜೀನ್ಸ್ ಉತ್ಪನ್ನವನ್ನು ಮಾರುಕಟ್ಟೆಗೆ ಒದಗಿಸುವ ಉದ್ದೇಶ ಹೊಂದಲಾಗಿದೆ ಹಾಗೂ ಸ್ಥಳೀಯ ನರುದ್ಯೋಗಿ ಯುವಕ ಯುವತಿಯರಿಗೆ ಪ್ರತ್ಯಕ್ಷ ಹಾಗೂ ಪರೋಕ್ಷವಾಗಿ ಉದ್ಯೋಗ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಹುಕ್ಕಾ ಬಾರ್ ನಿಯಂತ್ರಣಕ್ಕೆ ಕಾನೂನು : ಗೃಹ ಸಚಿವ ಡಾ.ಜಿ.ಪರಮೇಶ್ವರ

ಸುವರ್ಣಸೌಧ ಬೆಳಗಾವಿ ಡಿ.12: ಸರ್ಕಾರ ಡ್ರಗ್ಸ್ ಹಾಗೂ ಮಾದಕ ಪದಾರ್ಥಗಳ ಮಾರಾಟವನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ. ಆರೋಗ್ಯ, ಆಹಾರ ಇಲಾಖೆಗಳೊಂದಿಗೆ ಚರ್ಚಿಸಿ ಶೀಘ್ರವೇ ಹುಕ್ಕಾ ಬಾರ್ ನಿಯಂತ್ರಣಕ್ಕೆ ಕಾನೂನು ರೂಪಿಸುವುದಾಗಿ ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಮಂಗಳವಾರ ವಿಧಾನ ಸಭೆಯಲ್ಲಿ ಶಾಸಕ ಸಿ.ಕೆ.ರಾಮಮೂರ್ತಿ ಅವರ ಚುಕ್ಕೆ ಪ್ರಶ್ನೆಗೆ ಅವರು ಉತ್ತರಿಸಿದರು.

ಹುಕ್ಕಾ ಬಾರ್ ಸ್ಥಾಪನೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಿಂದ ಯಾವುದೇ ರೀತಿಯ ವ್ಯಾಪಾರ ಪರವಾನಗೆ ನೀಡುವುದಿಲ್ಲ. ಭಾರತೀಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರ(ಈಖಖಂಖ) ದಿಂದ ಪರವಾನ ಪಡೆದು ವ್ಯಾಪಾರಿಗಳು ಹುಕ್ಕಾ ಬಾರ್‌ಗಳನ್ನು ನಡೆಸುತ್ತಿದ್ದಾರೆ. ನ್ಯಾಯಲಯವು ಸಹ ಹುಕ್ಕಾ ಸೇದುವವರಿಗೆ ಪ್ರತ್ಯೇಕ ಸ್ಥಳ ನಗದಿ ಪಡಿಸಬೇಕು ಎಂದು ಹೇಳಿದೆ. ನಿಯಂತ್ರಣದ ಬಗ್ಗೆ ಹೇಳಿಲ್ಲ. ಆದರೂ ಯುವ ಜನಾಂಗದ ಸ್ವಾಥ್ಯದ ದೃಷ್ಟಿಯಿಂದ ಹುಕ್ಕಾ ಬಾರ್ ನಿಯಂತ್ರಣಕ್ಕೆ ಕಾನೂನೂ ರೂಪಿಸಲಾಗುವುದು ಎಂದರು.

ಅಕ್ಟೋಬರ್ 19ರಂದು ಬೆಂಗಳೂರಿನ ಕೊರಮಂಗಲದ ಹುಕ್ಕಾಬಾರ್‌ನಲ್ಲಿ ಜರುಗಿದ ಅಗ್ನಿ ಅವಘಡದಲ್ಲಿ ಯಾವುದೇ ಪ್ರಾಣಹಾನಿಯಾಗಿಲ್ಲ. ಅದೃಷ್ಟವಶಾತ್ ಕಟ್ಟಡಿಂದ ಜಿಗಿದ ವ್ಯಕ್ತಿಗೆ ಪ್ರಾಣಾಪಾಯವಾಗಿಲ್ಲ. ಮೂರನೇ ಮಹಡಿಯಲ್ಲಿ ಇದ್ದ ಹುಕ್ಕಾ ಬಾರ್‌ನಲ್ಲಿ 14 ಸಿಲೆಂಡರ್‌ಗಳನ್ನು ಸಂಗ್ರಹಿಸಲಾಗಿತ್ತು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ತಿಳಿಸಿದರು.

ಶಾಸಕ ಸುರೇಶ್ ಕುಮಾರ್ ಮಾತನಾಡಿ ಹುಕ್ಕಾ ಸೇದುವುದು ಸಿಗರೇಟ್ ಸೇದುವುದಕ್ಕಿಂತಲ್ಲೂ 200 ಪಟ್ಟು ಹೆಚ್ಚು ಹಾನ ಎಂಬುದು ಸಾಬೀತಾಗಿದೆ. ಪಂಜಾಬ್, ರಾಜಸ್ಥಾನ, ತಮಿಳುನಾಡು ಸೇರಿದಂತೆ ಹಲವು ರಾಜ್ಯಗಳಲ್ಲಿ ಹುಕ್ಕಾ ಬಾರ್‌ಗಳನ್ನು ನಷೇಧಿಸಲಾಗಿದೆ. ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ಅವರು ಸಹ ಹುಕ್ಕಾ ಬಾರ್ ನಷೇಧಕ್ಕೆ ಒಲವು ವ್ಯಕ್ತಪಿಸಿದ್ದರು. ಸರ್ಕಾರ ಕೂಡಲೇ ಈ ಕುರಿತು ಕ್ರಮ ಕೈಗೊಳ್ಳಬೇಕು ಎಂದರು.ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್ ಅವರು ಸಹ ಹುಕ್ಕಾ ಬಾರ್ ನಷೇಧಕ್ಕೆ ಒಲವು ವ್ಯಕ್ತಪಿಸಿದ್ದರು. ಸರ್ಕಾರ ಕೂಡಲೇ ಈ ಕುರಿತು ಕ್ರಮ ಕೈಗೊಳ್ಳಬೇಕು ಎಂದರು.

ಶಾಸಕ ಸಿ.ಕೆ.ರಾಮಮೂರ್ತಿ ಮಾತನಾಡಿ ಯುವ ಜನಾಂಗದ ಹಾದಿ ತಪ್ಪಿಸುತ್ತಿರುವ ಹುಕ್ಕಾ ಬಾರ್‌ಗಳನ್ನು ಸರ್ಕಾರ ನಷೇಧಿಸಲು ಆಗ್ರಹಿಸಿದರು.

ಧರ್ಮದಿಂದ ನಡೆದು,ಮಾನವೀಯ ನಡೆಯಿಂದ ಉತ್ತಮ ಸಮಾಜ ನಿರ್ಮಾಣ:ರಾಜ್ಯಪಾಲರು



ಬೆಳಗಾವಿ 12: ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಮಂಗಳವಾರ ಶ್ರೀ ಸಿದ್ಧಸೇನ್ ರಿಸರ್ಚ್ ಫೌಂಡೇಶನ್ ನಲ್ಲಿ ಆಯೋಜಿಸಲಾಗಿದ್ದ ಶ್ರೀ 1008ನೇ ಭಗವಾನ ಮಹಾ